**ಹೆಚ್ಚುವರಿ ಸಿವಿಲ್ ಹಾಗೂ ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ ಯಾದಗಿರಿ.**

**ಉಪಸ್ಥಿತರುಃ- ಶ್ರೀ ರಾಹುಲ ರಾವ್ ಬಿ.ಎ.ಎಲ್.ಎಲ್.ಬಿ**

**ಹೆಚ್ಚುವರಿ ಸಿವಿಲ್ ಮತ್ತು ಜೆ.ಎಂ.ಎಫ್.ಸಿ ಯಾದಗಿರಿ,**

**ಸಿ.ಸಿ. ನಂಃ 1185/2024**

**ಫಿರ್ಯಾಧಿದಾರಃ ಕರ್ನಾಟಕ ಸರ್ಕಾರದ ಪರವಾಗಿ ಯಾದಗಿರಿ (ಗ್ರಾ) ಪೊಲೀಸ್ ಠಾಣೆ**

**// ವಿರುದ್ದ //**

**ಆರೋಪಿ ಃ ಅಂಜಪ್ಪ @ ಆಂಜನೇಯ**

**ಆಪಾದನೆ**

ನಾನುಃ **ಶ್ರೀ ರಾಹುಲ ರಾವ್ ಬಿ.ಎ.ಎಲ್.ಎಲ್.ಬಿ** ಹೆಚ್ಚುವರಿ ಸಿವಿಲ್ ಮತ್ತು ಜೆ.ಎಂ.ಎಫ್.ಸಿ ಯಾದಗಿರಿ ಆದ ನಾನು ಆರೋಪಿಗಳಾದ

| | |
|---|---|
| ಆರೋಪಿ 1. | ಅಂಜಪ್ಪ @ ಆಂಜನೇಯ ತಂದೆ ಮಲ್ಲಪ್ಪ ಕಾರಕೇರ,<br>ಸಾಃ ಹೊನಗೇರಾ ಗ್ರಾಮ,<br>ತಾಃ ಮತ್ತು ಜಿಃ ಯಾದಗಿರಿ. |

**ನಿಮ್ಮ ವಿರುದ್ಧ ದೋಷಿಸುವ ಆಪಾದನೆ ಏನೆಂದರೆ,**

ಮೊದಲನೆಯದಾಗಿ ದಿನಾಂಕಃ 18-12-2023 ರಂದು ರಾಃ 08-40 ಗಂಟೆಗೆ ಯಾದಗಿರಿ (ಗ್ರಾ) ಪೋಲಿಸ್ ಠಾಣೆ ಸರಹದ್ದಿಲ್ಲಿ ಬರುವ ಹೋನಗೇರಾ ಗ್ರಾಮದ ಗುರುಲಿಂಗಪ್ಪ ಕಟಿಕಟಿ ಅವರ ಅಂಗಡಿಯ ಮುಂದೆ ಚಾಸಾಃ1 ರವರು ತತ್ತಿ ತರಲು ಹೋಗುತ್ತಿರುವಾಗ ಆರೋಪಿಯಾದ ನೀನು ಚಾಸಾಃ1 ರವರಿಗೆ ಲೇ ಸೂಳಿ ಮಗನೆ ನಿನ್ನ ಸೊಕ್ಕು ಬಹಳ ಆಗಿದೆ ಇವತ್ತು ನೀನು ನನ್ನ ಕೈಯಾಗ ಬ್ಯಾಟಿ ಸಿಕ್ಕಂಗ ಸಿಕ್ಕಿದಿ ನಿನಗೆ ಖಲಾಸ ಮಾಡುತ್ತೇನೆ ಬೋಸಡಿ ಮಗನೆ ಅಂತಾ ಅವಾಚ್ಯ ಶಬ್ದಗಳಿಂದ ಬೈದಿದ್ದು, ಈ ಮೂಲಕ ನೀವು ಭಾ.ದಂ.ಸಂ. 504 ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

2. ಈ ಮೇಲೆ ಹೇಳಿದ ದಿನಾಂಕ, ಸಮಯ ಸ್ಥಳ ಮತ್ತು ಸಂದರ್ಭದಲ್ಲಿ ಆರೋಪಿಯಾದ ನೀನು ಚಾಸಾಃ1 ರವರಿಗೆ ಕೈಯಿಂದ ಕಪಾಳಕ್ಕೆ ಹೊಡೆದು, ಕಾಲಿನಿಂದ ಒದಿದ್ದು, ಈ ಮೂಲಕ ಭಾ. ದಂ. ಸಂ. ಕಲಂ 323 ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುತ್ತೀರಿ.

3. ಈ ಮೇಲೆ ಹೇಳಿದ ದಿನಾಂಕ, ಸಮಯ ಸ್ಥಳ ಮತ್ತು ಸಂದರ್ಭದಲ್ಲಿ ಆರೋಪಿಯಾದ ನೀನು ಚಾಸಾಃ 1 ರವರಿಗೆ ಕಟ್ಟಿಗೆಯಿಂದ ಎಡಗೈ ಭುಜದ ಮೇಲೆ ಹೋಡೆದು ಗುಪ್ತ ಪೆಟ್ಟು ಮಾಡಿದ್ದು, ಈ ಮೂಲಕ ಭಾ. ದಂ. ಸಂ. ಕಲಂ 324 ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುತ್ತೀರಿ.

4. ಈ ಮೇಲೆ ಹೇಳಿದ ದಿನಾಂಕ, ಸಮಯ ಸ್ಥಳ ಮತ್ತು ಸಂದರ್ಭದಲ್ಲಿ ಆರೋಪಿಯಾದ ನೀನು ಚಾಸಾಃ1 ರವರಿಗೆ ದೊಡ್ಡ ಕಲ್ಲು ತಂದು ಎತ್ತಿ ಹಾಕಿ ಸಾಯಿಸುತ್ತೇನೆ ಮಗನೆ ಅಂತಾ ಕಲ್ಲು ಎತ್ತಿಕೊಂಡು ಬಂದು ಜೀವ ಬೆದರಿಕೆ ಹಾಕಿದ್ದು, ಈ ಮೂಲಕ ಭಾ. ದಂ. ಸಂ. ಕಲಂ 506 ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುತ್ತೀರಿ.

(ಮೇಲ್ಕಾಣಿಸಿದ ದೋಷಾರೋಪಣೆಯನ್ನು ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಿ ತೆರೆದ ನ್ಯಾಯಾಲಯದಲ್ಲಿ ದೋಷಾರೋಪಣೆಯನ್ನು ಆರೋಪಿತರಿಗೆ ತಿಳಿಯವ ಭಾಷಯಲ್ಲಿ ಓದಿ ಹೇಳಲಾಯಿತು)

**ದಿನಾಂಕಃ 22-09-2025.**
**ಸ್ಥಳಃ ಯಾದಗಿರಿ.**

**ಹೆಚ್ಚುವರಿ ಸಿವಿಲ್ ಮತ್ತು ಜೆ ಎಮ್ ಎಫ್ ಸಿ**
**ನ್ಯಾಯಾಧೀಶರು ಯಾದಗಿರಿ.**